ಕೈಲಾಸಪುರದಲ್ಲಿ ಪೂಜೆಗೊಂಬ ದೇವಿ
ಮೂಲಪ್ರಕೃತಿ ಸರ್ವ ವರ್ಣಾಭಿಮಾನಿನಿ
ಪಾಲಸಾಗರ ಶಾಯಿ ವಿಜಯವಿಠಲನೊಳು
ಲೀಲೆ ಮಾಡುವ ನಾನಾಭರಣೆ ಭೂಷಣೆ ಪೂರ್ಣೆ ||೪||
ಆದಿ ತಾಳ
ಗೋಪಿನಂದನೆ ಮುಕ್ತೆ ದೈತ್ಯಸಂತತಿ ಸಂ
ತಾಪವ ಕೊಡುತಿಪ್ಪ ಮಹಾಕಠೊರ ಉಗ್ರ
ರೂಪ ವೈಲಕ್ಷಣೆ ಅಜ್ಞಾನಕ್ಕಭಿಮಾನಿನಿ
ತಾಪತ್ರಯ ವಿನಾಶ ಓಂಕಾರೆ ಹೂಂಕಾರೆ
ಪಾಪಿಕಂಸಗೆ ಭಯ ತೊರಿದೆ ಬಾಲ ಲೀಲೆ
ವ್ಯಾಪುತ ಧರ್ಮ ಮಾರ್ಗ ಪ್ರೇರಣೆ ಅಪ್ರಾಕೃತೆ
ಸ್ವಪ್ನದಲಿ ನಿನ್ನ ನೆನೆಸಿದ ಶರಣನಿಗೆ
ಅಪಾರವಾಗಿದ್ದ ವಾರಿಧಿಯಂತೆ ಮಹಾ
ಆಪತ್ತುಬಂದಿರಲು ಹಾರಿ ಪೋಗೋವು ಸಪ್ತ
ದ್ವೀಪ ನಾಯಿಕೆ ನರಕ ನಿರ್ಲೇಪೆ ತಮೋಗುಣದ
ವ್ಯಾಪಾರ ಮಾಡಿಸಿ ಭಕ್ತಜನಕೆ ಪುಣ್ಯ
ಸೋಪಾನ ಮಾಡಿಕೊಡುವ ಸೌಭಾಗ್ಯವಂತೆ ದುರ್ಗೆ
ಪ್ರಾಪುತವಾಗಿ ಎನ್ನ ಮನದಲ್ಲಿ ನಿಂದು ದುಃಖ
ಕೂಪದಿಂದಲಿ ಎತ್ತಿ ಕಡೆಮಾಡು ಜನ್ಮಂಗಳು
ಸೌಪರ್ಣಿ ಮಿಗಿಲಾದ ಸತಿಯರು ನಿತ್ಯ ನಿನ್ನ
ಆಪಾದ ಮೌಳಿತನಕ ಭಜಿಸಿ ಭವ್ಯರಾದರು
ನಾ ಪೆಳುವುದೇನು ಪಾಂಡವರ ಮನೋಭೀಷ್ಟೆ
ಈ ಪಾಂಚ ಭೌತಿಕದಲ್ಲಿ ಆವ ಸಾಧನ ಕಾಣೇ
ಶ್ರೀಪತಿ ನಾಮ್ಮನ್ನೆ ಜಿಹ್ವಾಗ್ರಹದಲಿ ನೆನೆವ
ಔಪಾಸನ ಕೊಡು ರುದ್ರಾದಿಗಳ ವರದೇ
ತಾಪಸ ಜನ ಪ್ರೀಯ ವಿಜಯ ವಿಠ್ಠಲ ಮೂರ್ತಿಯ